## 53. ದೆಹಲಿಯಲ್ಲಿ ದೇಶದ ಅತಿ ದೊಡ್ಡ ಕೋವಿಡ್ ಕೇರ್ ಸೆಂಟರ್

ಕೊರೊನಾ ಸೋಂಕಿತರಿಗೆ ಚಿಕಿತ್ಸೆ ನೀಡಲು ದೆಹಲಿಯಲ್ಲಿ ದೇಶದಲ್ಲೇ ದೊಡ್ಡದಾದ ತಾತ್ಕಾಲಿಕ ಚಿಕಿತ್ಸಾ ಕೇಂದ್ರವನ್ನು ತೆರೆಯಲಾಗಿದೆ. ದೆಹಲಿ ಹೊರವಲಯದಲ್ಲಿರುವ ವಿಶಾಲವಾದ ರಾಧಾ ಸೋಮಿ ಸತ್ಸಂಗ ಬಿಯಾಸ್ ಕ್ಯಾಂಪಸ್‌ನಲ್ಲಿ ತಾತ್ಕಾಲಿಕ 10,208 ಬೆಡ್‌ಗಳನ್ನು ಅಳವಡಿಸಲಾಗುತ್ತಿದೆ. ಈ ಕ್ಯಾಂಪಸ್ ಸುಮಾರು 22 ಫುಟ್ಬಾಲ್ ಕ್ರೀಡಾಂಗಣದಷ್ಟು ವಿಸ್ತೀರ್ಣವನ್ನು ಹೊಂದಿದೆ. ಇದಕ್ಕೆ ಸರ್ದಾರ್ ಪಟೇಲ್ ಕೋವಿಡ್ ಕೇರ್ ಸೆಂಟರ್ ಹಾಗೂ ಹಾಸ್ಪಿಟಲ್ ಎಂದು ಹೆಸರಿಡಲಾಗಿದೆ.

**ಆಸ್ಪತ್ರೆಯಾಗಿ ಮಾರ್ಪಟ್ಟ ಕ್ಯಾಂಪಸ್:** ಈ ಕ್ಯಾಂಪಸ್ 1,700 ಅಡಿ ಉದ್ದ, 700 ಅಡಿ ಅಗಲ ಹಾಗೂ 200 ಆವರಣಗಳನ್ನು ಒಳಗೊಂಡಿದೆ. ಇಲ್ಲಿನ ನೆಲ ಮಣ್ಣಿನಿಂದ ಕೂಡಿದ್ದು, ಕಾರ್ಪೆಟ್ಸ್‌ನಿಂದ ಮುಚ್ಚಲಾಗಿದೆ. ಇದರ ಮೇಲೆ ವಿನ್ಯೆಲ್ ಶೀಟ್ ಹಾಕಲಾಗಿದ್ದು, ಸ್ವಚ್ಛತೆ ಸುಲಭವಾಗುವಂತೆ ಮಾಡಲಾಗಿದೆ. ಕ್ಯಾಂಪಸ್‌ನ್ನು 116 ವಿಭಾಗ ಮಾಡಲಾಗಿದ್ದು, ಪ್ರತಿ ವಿಭಾಗಕ್ಕೆ 88 ಬೆಡ್‌ನಂತೆ, 10,208 ಬೆಡ್‌ಗಳನ್ನು ಅಳವಡಿಸಲಾಗುತ್ತಿದೆ. ಈಗಾಗಲೇ 2 ಸಾವಿರ ಬೆಡ್‌ಗಳನ್ನು ಸಿದ್ಧಪಡಿಸಲಾಗಿದ್ದು, ಜುಲೈ ಮೊದಲ ವಾರದಲ್ಲಿ 10,208 ಹಾಸಿಗೆಗಳು ಸಿದ್ಧವಾಗಲಿವೆ. ಈ ತಾತ್ಕಾಲಿಕ ಚಿಕಿತ್ಸಾ ಕೇಂದ್ರ ನಿರ್ಮಾಣಕ್ಕಾಗಿ ಇಂಡೋ ಟಿಬೇಟಿಯನ್ ಗಡಿ ಪಡೆಯನ್ನು ಬಳಸಿಕೊಳ್ಳಲಾಗಿದೆ.

ಈ ಚಿಕಿತ್ಸಾ ಕೇಂದ್ರಕ್ಕೆ ರೋಗಿಗಳ ಸಂಬಂಧಿಕರು ಪ್ರವೇಶಿಸಲು ಅವಕಾಶವಿಲ್ಲ, ಆ್ಯಂಬುಲೆನ್ಸ್ ಮೂಲಕ ಸೋಂಕಿತರನ್ನು ಇಲ್ಲಿಗೆ ಕರೆದುಕೊಂಡು ಬರಲಾಗುವುದು. ಸಿಬ್ಬಂದಿಗಳ ಮೂಲಕ ರೋಗಿಗಳಿಗೆ ವಸ್ತುಗಳನ್ನು ತಲುಪಿಸಬಹುದಾಗಿದೆ. ಇ-ಹಾಸ್ಪಿಟಲ್ ಆ್ಯಪ್ ಅಭಿವೃದ್ಧಿಪಡಿಸಲಾಗಿದ್ದು, 400 ಕಂಪ್ಯೂಟರ್, ಇಂಟರ್‌ನೆಟ್, ಮೊಬೈಲ್ ಸಂಪರ್ಕ ಕಲ್ಪಿಸಲಾಗಿದೆ. ಈ ಕೇಂದ್ರವು ಚೀನಾದಲ್ಲಿ ತೆರೆದಿದ್ದ ತಾತ್ಕಾಲಿಕ ಚಿಕಿತ್ಸಾ ಕೇಂದ್ರಕ್ಕಿಂತ 10 ಪಟ್ಟು ದೊಡ್ಡದ್ದಾಗಿದೆ.

ಆಧಾರ:ಉದಯವಾಣಿ, ದಿನಾಂಕ:26.06.2020